2

## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 393 |
| 2 | ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | 04.03.2020 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಕಂದಾಯ ಇಲಾಖೆಯಲ್ಲಿ ಕಳೆದ ಹಲವಾರು ವರ್ಷಗಳಿಂದ ಸರ್ವೇ ಕೆಲಸ ಬಾಕಿ ಇದ್ದು, ಇದರಿಂದಾಗಿ ಸಾರ್ವಜನಿಕರು ಎದುರಿಸುತ್ತಿರುವರ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಭೂಮಾಪನ ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಮೋಜಣಿ ತಂತ್ರಾಂಶದ ಮುಖಾಂತರ ONLINE ನಲ್ಲಿ ಸ್ವೀಕರಿಸಲಾಗುತ್ತಿದ್ದು. ಅಳತೆಗಾಗಿ ಸಂಬಂಧಿಸಿದಂತೆ ಭೂಮಾಪಕರಿಗೆ ONLINE ನಲ್ಲಿ ವಿತರಿಸಲಾಗುತ್ತಿದೆ. ಅಳತೆಯಾದ ನಂತರ ಭೂಮಾಪಕರು ONLINE ನಲ್ಲಿ ಕಡತಗಳನ್ನು ಅಪ್‌ಲೋಡ್ ಮಾಡಲು ಹಾಗೂ ಅಪ್‌ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದನೆಯನ್ನು ಸಹ ONLINE ನಲ್ಲೇ ನಿರ್ವಹಿಸಲಾಗುತ್ತಿದೆ. ಪ್ರತಿ ಹಂತದಲ್ಲಿಯೂ ಸರದಿ ಸಾಲಿನಂತೆ (FIFO) ಅಳವಡಿಸಲಾಗಿದ್ದು. ಯಾವುದೇ ಹಂತದಲ್ಲಿ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮವಹಿಸ ಲಾಗುತ್ತದೆ.<br>ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಸೂಚನೆ ನೀಡಲಾಗುತ್ತಿದೆ.<br>ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕು ಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಬಾಕಿ ಇರುವ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇಲಾಖೆಯಲ್ಲಿ ಸ್ವೀಕೃತವಾಗುತ್ತಿರುವ ಪ್ರಕರಣಗಳ ಜೊತೆಯಲ್ಲಿ ಬಾಕಿ ಇರುವ ಹಳೆಯ ಪ್ರಕರಣಗಳನ್ನು ಸಹ ಪ್ರಥಮ ಆದ್ಯತೆ ಮೇರೆಗೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಆ | ಇಲಾಖೆಗೆ ಒಟ್ಟು ಮಂಜೂರಾಗಿರುವ ಸರ್ವೇಯರ್‌ಗಳ ಸಂಖ್ಯೆ ಎಷ್ಟು; ಆ ಪೈಕಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; | ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಲ್ಲಿ ಭೂಮಾಪಕರ (ಸರ್ವೆಯರ್) ಹುದ್ದೆಗಳ ಮಂಜೂರಿ ಭರ್ತಿ ಹಾಗೂ ಖಾಲಿ ಹುದ್ದೆಗಳ ವಿವರ ಕೆಳಗಿನಂತೆ ಇರುತ್ತದೆ.<br><br>ಮಂಜೂರು: 4020 / ಭರ್ತಿ: 3606 +117 = 3723 / ಖಾಲಿ: 297<br><br>ಭೂಮಾಪನ ಇಲಾಖೆಯಲ್ಲಿ 3606 ಭೂಮಾಪಕರುಗಳು ಹಾಲಿ ಕರ್ತವ್ಯ ನಿರ್ವಹಿಸುತ್ತಿದ್ದು ಇನ್ನುಳಿದ 117 ಭೂಮಾಪಕರುಗಳು ಅನ್ಯ ಇಲಾಖೆಯಲ್ಲಿ ಮತ್ತು ಅನ್ಯ ಸೇವೆ ಮೇಲೆ ಕೆಲಸ ನಿರ್ವಹಿಸುತ್ತಿರುತ್ತಾರೆ. ಈ ಹುದ್ದೆಗಳು ಕಾಯ್ದಿರಿಸಲಾದ ಹುದ್ದೆಗಳಾಗಿರುತ್ತವೆ. |
| ಇ | ಇದರಲ್ಲಿ ಎಷ್ಟು ಮಂದಿ ಸರ್ಕಾರಿ ಸರ್ವೇಯರ್‌ಗಳಿದ್ದಾರೆ; ಎಷ್ಟು ಮಂದಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ; | ಭೂಮಾಪನ ಇಲಾಖೆಯಲ್ಲಿ ಒಟ್ಟು 3723 ಸರ್ಕಾರಿ ಸರ್ವೇಯರ್‌ಗಳು ಕಾರ್ಯ ನಿರ್ವಹಿಸು ತ್ತಿರುತ್ತಾರೆ ಹಾಗೂ ಗುತ್ತಿಗೆ ಆಧಾರದ ಮೇಲೆ ಯಾವ ಸರ್ವೇಯರ್‌ಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲ. |
| ಈ | ರಾಜ್ಯದಲ್ಲಿನ ಸರ್ವೇ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಸರ್ವೇಯರ್‌ಗಳ ನೇಮಕಾತಿ ಪ್ರಕ್ರಿಯ ನಡೆಸುವ ಯೋಜನೆ ಮಾಡಿದೆಯೇ; | ಹಾಲಿ ಇಲಾಖೆಯಲ್ಲಿ 297 ಭೂಮಾಪಕರ ಹುದ್ದೆಗಳು ಖಾಲಿ ಇದ್ದು, ಈ ಪೈಕಿ ಗ್ರೂಪ್ ಡಿ ಹುದ್ದೆಯಿಂದ ಮುಂಬಡ್ತಿಗೆ ಲಭ್ಯವಾಗುವ ಹುದ್ದೆಗಳನ್ನು ಭರ್ತಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಇನ್ನುಳಿದ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲಾಗುವುದು. |
| ಉ | ಮಾಡಿದಲ್ಲಿ ಯಾವ ಕಾಲಮಿತಿಯೊಳಗೆ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು? | |

Inner table:

| ಮಂಜೂರು | ಭರ್ತಿ | ಖಾಲಿ |
|---|---|---|
| 4020 | 3606<br>+117<br>3723 | 297 |

ಸಂಖ್ಯೆ: ಕಂಇ 21 ಎಸ್‌ಎಸ್‌ಸಿ 2020

(ಆರ್. ಅಶೋಕ)
ಕಂದಾಯ ಸಚಿವರು